# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 544 (691)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ರಾಜ್ಯದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರ ಕೃಷಿ ನೀರಾವರಿ ಪಂಪುಸೆಟ್‌ಗಳಿಗೆ ಕಾಲಮಿತಿಯಲ್ಲಿ ಸಂಪರ್ಕ ಕಲ್ಪಿಸದಿರುವ ಕುರಿತು

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮೆಸ್ಕಾಂ ವ್ಯಾಪ್ತಿಯಲ್ಲಿ ರೈತರ ಕೃಷಿ ಪಂಪು ಸೆಟ್‌ಗಳಿಗೆ ಮಾರ್ಗ ವಿಸ್ತರಣೆ ಯೋಜನೆಯಲ್ಲಿ ನೋಂದಾಯಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಮೂಲಭೂತ ಸೌಕರ್ಯವನ್ನು ಕಲ್ಪಿಸಲು ಶುಲ್ಕವನ್ನು ಪಾವತಿಸದ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ಈ ಶುಲ್ಕ ಪಾವತಿಸಿದ ರೈತರ ಜೇಷ್ಠತಾ ಪಟ್ಟಿಯನ್ನು ಪಾರದರ್ಶಕವಾಗಿಸಲು ಇಲಾಖೆಯಿಂದ ಕೈಗೊಂಡ ಕ್ರಮಗಳಾವುವು; ರೈತರು ಇಲಾಖಾ ವೆಬ್ ಸೈಟ್‌ಗಳ ಮೂಲಕ ಜೇಷ್ಠತೆಯನ್ನು ತಿಳಿಯಲು ಅವಕಾಶವನ್ನು ಕಲ್ಪಿಸಲಾಗಿದೆಯೇ; ಇಲ್ಲವಾದಲ್ಲಿ ಕಾರಣವೇನು;

(ಇ) ಈ ಮೂಲಭೂತ ಸೌಕರ್ಯವನ್ನು ಕಲ್ಪಿಸಲು ಶುಲ್ಕವನ್ನು ಪಾವತಿಸಿಕೊಂಡರೂ ಸಹಾ ಸಾಮಾಗ್ರಿಗಳನ್ನು ನೀಡದೇ ವರ್ಷಾನುಗಟ್ಟಲೇ ವಿದ್ಯುತ್ ಸಂಪರ್ಕವನ್ನು ನೀಡದಿರಲು ಕಾರಣವೇನು ; ಇದರಿಂದ ರೈತರ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗಿ ಆರ್ಥಿಕ ನಷ್ಟವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅರ್ಜಿಗಳಿಗೆ ಕಲ್ಪಿಸಲು ಕನಿಷ್ಠ ಕಾಲಮಿತಿಯನ್ನು ನಿಗದಿ ಪಡಿಸಲು ಇರುವ ತೊಡಕುಗಳೇನು?